**ದಿನಾಂಕ: 17.09.2022 ರಂದು ಬೆಳಿಗ್ಗೆ 10.30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್–178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 178ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬೆಸ್ಕಾಂ |
| ಸದಸ್ಯರುಗಳು | ತೋಟಗಾರಿಕಾ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಅರಣ್ಯ ಇಲಾಖೆ ಅಧಿಕಾರಿಗಳು |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು |
| ಸದಸ್ಯರುಗಳು | ಜೆ.ಪಿ.ನಗರ ಪೊಲೀಸ್ ಠಾಣಾ ಅಧಿಕಾರಿಗಳು |
| ಸದಸ್ಯರುಗಳು | ವಾರ್ಡ್ 178 ರ UPHC ನ ವೈದ್ಯರು |
| ಸದಸ್ಯರುಗಳು | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| ಸಾರ್ವಜನಿಕರು | ಮಾರ್ಷಲ್ |

## :ನಡಾವಳಿಯ ವರದಿ:

➢ ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

➢ ವಾರ್ಡ್ ವ್ಯಾಪ್ತಿಯ ಹಲವು ಕಡೆಗಳಲ್ಲಿ ಬೀದಿ ನಾಯಿಗಳ ಹಾವಳಿ ಜಾಸ್ತಿ ಆಗಿದ್ದು, ಇದನ್ನು ಕೂಡಲೇ ತಡೆಗಟ್ಟುವಂತೆ ಹಾಗೂ ಹಸುಗಳು ರಸ್ತೆಗಳಲ್ಲಿ ಓಡಾಡುತ್ತಿರುವುದರಿಂದ ವಾಹನ ಸಂಚಾರಕ್ಕೆ ಅಡಚಣೆಯುಂಟಾಗುತ್ತಿರುವುದಾಗಿ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ:–ಪಶುಸಂಗೋಪನೆ ಇಲಾಖೆ**

➢ ವಾರ್ಡ್ ವ್ಯಾಪ್ತಿಯ 7ನೇ ಅಡ್ಡರಸ್ತೆ, 24ನೇ ಮುಖ್ಯರಸ್ತೆಯಲ್ಲಿರುವ ಮರವು ಅಪಾಯಕಾರಿ ಸ್ಥಿತಿಯಲ್ಲಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುವ ಸಂಭವವಿರುತ್ತದೆ. ಆದುದರಿಂದ ಕೂಡಲೇ ಮರವನ್ನು ತೆರವುಗೊಳಿಸುವಂತೆ ಟ್ರಾಫಿಕ್ ಪೊಲೀಸ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ ಹಾಗೂ ನಂ. 934, 21ನೇ ಮುಖ್ಯರಸ್ತೆಯಲ್ಲಿನ ನಿವೇಶನದ ಮುಂಭಾಗದಲ್ಲಿರುವ ಮರದ ರೆಂಬೆ–ಕೊಂಬೆಗಳನ್ನು ತೆರವುಗೊಳಿಸುವಂತೆ ಕೋರಿರುತ್ತಾರೆ.

**ಕ್ರಮ : ಅರಣ್ಯ ಸಂರಕ್ಷಣಾಧಿಕಾರಿಗಳು, ದಕ್ಷಿಣ**

- ವಾರ್ಡ್ 199 (ಹಳೆಯ ವಾರ್ಡ್ ಸಂಖ್ಯೆ 178) ರ ಫ್ರಾಂಕ್ ಪಬ್ಲಿಕ್ ಸ್ಕೂಲ್‌ರವರು ತಮ್ಮ ಶಾಲೆಯ ಮುಂಭಾಗದಲ್ಲಿ ಧ್ವಜದ ಸ್ಥಂಭ ಹಾಗೂ ಮರಕ್ಕೆ ಕಟ್ಟೆ ಕಟ್ಟಿರುವುದನ್ನು ತೆರವುಗೊಳಿಸಬೇಕೆಂದು ಹಾಗೂ 3ನೇ ಎಫ್ ಮುಖ್ಯರಸ್ತೆ, 9ನೇ ಅಡ್ಡರಸ್ತೆ, ಜೆ.ಪಿ.ನಗರ 1ನೇ ಹಂತದಲ್ಲಿರುವ ಖಾಲಿ ನಿವೇಶನವನ್ನು ಸ್ವಚ್ಛಗೊಳಿಸಲು, 21ನೇ ಮುಖ್ಯರಸ್ತೆ ಧನ್ವಂತರಿ ಪಾರ್ಕಿನ ಗೇಟಿನ ಎದುರು ಹಾಗೂ 15ನೇ ಅಡ್ಡರಸ್ತೆ, ಕೆನರಾ ಬ್ಯಾಂಕ್ ಜಂಕ್ಷನ್‌ನಲ್ಲಿ ರಸ್ತೆ ಉಬ್ಬನ್ನು ಹಾಕುವಂತೆ, 15ನೇ, 16ನೇ & 17ನೇ ಅಡ್ಡರಸ್ತೆ ಹಾಗೂ 22ನೇ ಮುಖ್ಯರಸ್ತೆ, ಜೆ.ಪಿ.ನಗರ 5ನೇ ಹಂತದಲ್ಲಿ ರಸ್ತೆಗಳು ಹಾಳಾಗಿದ್ದು, ಇದನ್ನು ಸರಿಪಡಿಸುವಂತೆ ಹಾಗೂ ಧನ್ವಂತರಿ ಪಾರ್ಕಿನ ಒಳಗೆ ಹಾಗೂ ಸುತ್ತಮುತ್ತಲಿನ ರಸ್ತೆಗಳಲ್ಲಿ ಕೇಬಲ್‌ಗಳು ನೇತಾಡುತ್ತಿದ್ದು, ಇದರಿಂದಾಗಿ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತೊಂದರೆಯಾಗುತ್ತಿರುವುದಾಗಿ, ಇದನ್ನು ತೆರವುಗೊಳಿಸುವಂತೆ ಸಭೆಯಲ್ಲಿ ಕೋರಿರುತ್ತಾರೆ.

**ಕ್ರಮ:-ಸ.ಕಾ.ನಿ.ಅ., ಜೆ.ಪಿ.ನಗರ ಉಪವಿಭಾಗ**

- 9ನೇ ಅಡ್ಡರಸ್ತೆ, 17ನೇ ಮುಖ್ಯರಸ್ತೆಯ ಜಂಕ್ಷನ್‌ನಲ್ಲಿ ಅನಧಿಕೃತವಾಗಿ ಪಾರ್ಕಿಂಗ್ ಮಾಡುವುದರಿಂದ, ಟ್ರಾಫಿಕ್ ದಟ್ಟಣೆ ಹಾಗೂ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿರುವುದಾಗಿ, 9ನೇ ಅಡ್ಡರಸ್ತೆ, 21ನೇ ಮುಖ್ಯರಸ್ತೆ ಜಂಕ್ಷನ್‌ಗಳಲ್ಲಿ ಹೋಂಗಾರ್ಡ್‌ರವರನ್ನು ನೇಮಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ : ಜಯನಗರ ಸಂಚಾರಿ ಪೊಲೀಸ್ ಠಾಣೆ**

- ವಾರ್ಡ್ ವ್ಯಾಪ್ತಿಯ 9ನೇ ಅಡ್ಡರಸ್ತೆ, ಜೆ.ಪಿ.ನಗರ 2ನೇ ಹಂತ, ಜಂಬೋ ಕಿಡ್ಸ್‌ನ ಒಳಾಂಗಣ ಹಾಗೂ ಹೊರಾಂಗಣಗಳಲ್ಲಿ ಕಸ ತುಂಬಿಹೋಗಿದ್ದು, ಇದರಿಂದಾಗಿ ಅಕ್ಕ-ಪಕ್ಕದ ನಿವೇಶನದವರಿಗೆ ತೊಂದರೆಯಾಗುತ್ತಿದ್ದು, ಇದರ ಬಗ್ಗೆ ನಿವೇಶನದ ಮಾಲೀಕರಿಗೆ ನೋಟೀಸ್ ಜಾರಿ ಮಾಡುವಂತೆ ಸಭೆಯಲ್ಲಿ ತಿಳಿಸಲಾಗಿರುತ್ತದೆ.

**ಕ್ರಮ : ಸಹಕಂದಾಯ ಅಧಿಕಾರಿಗಳು, ಜೆ.ಪಿ.ನಗರ ಉಪವಲಯ**

- ವಾರ್ಡ್ ವ್ಯಾಪ್ತಿಯ ಧನ್ವಂತರಿ ಪಾರ್ಕಿನ ಒಳಗಡೆ ಇರುವ ನೀರಿನ ಪೈಪ್‌ಲೈನ್ ಹಳೆಯದಾಗಿದ್ದು, ಹಲವು ಕಡೆಗಳಲ್ಲಿ ಹಾಳಾಗಿದ್ದು, ಇದರಿಂದಾಗಿ ಶೌಚಾಲಯಕ್ಕೆ ನೀರಿನ ಸಂಪರ್ಕ ಕಡಿತಗೊಂಡಿರುತ್ತದೆ. ಇದರಿಂದಾಗಿ ಪಾರ್ಕಿನಲ್ಲಿ ವಾಂಕಿಂಗ್ ಬರುವ ಹಿರಿಯ ನಾಗರೀಕರಿಗೆ ತೊಂದರೆಯಾಗುತ್ತಿದ್ದು, ಇದನ್ನು ಕೂಡಲೇ ಸರಿಪಡಿಸುವಂತೆ ಸಭೆಯಲ್ಲಿ ಚರ್ಚಿಸಲಾಗಿರುತ್ತದೆ.

**ಕ್ರಮ : ಅಧೀಕ್ಷಕರು, ತೋಟಗಾರಿಕೆ ಇಲಾಖೆ (ದಕ್ಷಿಣ)**

- ವಾರ್ಡ್ ವ್ಯಾಪ್ತಿಯ 21ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತದ ಹಾಪ್‌ಕಾಮ್ಸ್ ಹಿಂಭಾಗದಲ್ಲಿರುವ ಕಂದಾಯ ಕಛೇರಿ ಮುಂಭಾಗದಲ್ಲಿ ರಾತ್ರಿ ವೇಳೆಯಲ್ಲಿ ಕುಡಿದ ಬಾಟಲಿಗಳನ್ನು ಹಾಗೂ ಕಸವನ್ನು ಹಾಕುತ್ತಿರುವುದು ದೂರು ಬಂದಿರುತ್ತದೆ. ರಾತ್ರಿವೇಳೆಯಲ್ಲಿ ಪೊಲೀಸ್ ಬೀಟ್‌ಅನ್ನು ಹೆಚ್ಚು ಮಾಡಬೇಕಾಗಿ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ : ಆರಕ್ಷಕ ವೃತ್ತ ನಿರೀಕ್ಷಕರು, ಜೆ.ಪಿ.ನಗರ ಪೊಲೀಸ್ ಠಾಣೆ**

- ವಾರ್ಡ್ ವ್ಯಾಪ್ತಿಯ 24ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತ ಒಳಚರಂಡಿ ಪೈಪ್‌ಲೈನ್‌ಗಳು ಹಾಳಾಗಿ ದುರ್ವಾಸನೆ ಬರುತ್ತಿರುತ್ತದೆ. ಇದರಿಂದಾಗಿ ಅಕ್ಕ-ಪಕ್ಕದ ನಿವೇಶನದವರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ, ಇದನ್ನು ಕೂಡಲೇ ಸರಿಪಡಿಸುವಂತೆ ಸಭೆಯಲ್ಲಿ ಚರ್ಚಿಸಲಾಯಿತು.

**ಕ್ರಮ : ಸ.ಕಾ.ನಿ.ಅ., ಬಿಡಬ್ಲ್ಯೂಎಸ್ಎಸ್‌ಬಿ**

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 11.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ ಶ್ರೀ ಅಶ್ವತ್‌ರಾಮನ್ .ಆರ್, ವಾರ್ಡ್ 199 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ವಾರ್ಡ್ 199 ರ ಕಿರಿಯ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**